## **ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ. ಸಂಖ್ಯೆಃ 192/2024**

**ಪಿರ್ಯಾದಿ** ಃ ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,
ಮೂಡಿಗೆರೆ.

**ವಿರುದ್ಧ**

**ಆರೋಪಿ** ಃ ಆಸೀಫ್ ಬಿನ್ ದಿಃ ಯೂಸೂಫ್,
ವಯಸ್ಸು ಸುಮಾರು 35 ವರ್ಷ,
ವಾಸಃ ಸರ್ವೋದಯ ನಗರ,
ಹಳೇಮೂಡಿಗೆರೆ ಗ್ರಾಮ,
ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

## **ಆಪಾದನೆಯ ಸಾರಾಂಶ**

ನಾನು ಶ್ರೀ ಸಚಿನ್.ಡಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

**1.** ದಿನಾಂಕಃ 13.11.2023 ರಂದು ರಾತ್ರಿ 9.45 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಬಿದರಹಳ್ಳಿ ಗ್ರಾಮ ಪಂಚಾಯತಿಗೆ ಹೋಗುವ ರಸ್ತೆಯ ಹತ್ತಿರ ಎನ್.ಹೆಚ್-73 ರ ರಸ್ತೆಯಲ್ಲಿ ಚಾಸಾ1 ರವರ ಮಗ ಮಂಜುನಾಥ ರವರು ಅವರ ವಾಹನ ನೋಂದಣಿ ಸಂಖ್ಯೆಕೆಎ-13-ಇಎಫ್-1994 ನೇ ಮೋಟಾರ್ ಸೈಕಲ್ ನಲ್ಲಿ ಚಾಸಾ1 ರವರನ್ನು ಹಿಂಬದಿ ಸೀಟಿನಲ್ಲಿ ಕೂರಿಸಿಕೊಂಡು ಸಂಬಂಧಿಕರ ಮನೆಯ ತಿಥಿ ಕಾರ್ಯ ಮುಗಿಸಿಕೊಂಡು ಮೂಡಿಗೆರೆ ಕಡೆಯಿಂದ ಬಣಕಲ್-ಹೊರಟ್ಟಿ ಕಡೆಗೆ ವಾಪಾಸ್ ಮನೆಗೆ ಹೋಗುತ್ತಿರುವಾಗ, ಮೂಡಿಗೆರೆ ಕಡೆಯಿಂದ ಸದರಿ ವಾಹನದ ಹಿಂಬದಿಯಿಂದ ಬಂದ ಆರೋಪಿಯಾದ ನೀವು ನಿಮ್ಮ ವಾಹನ ನೋಂದಣಿ ಸಂಖ್ಯೆಕೆಎ-42-5959 ನೇ ಲಾರಿಯನ್ನು ತುಂಬಾ

ಅಜಾಗರೂಕತೆಯಿಂದ ಮತ್ತು ನಿರ್ಲಕ್ಷತನದಿಂದ ಚಾಲನೆ ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ನಿಮ್ಮ ವಾಹನವನ್ನು ತುಂಬಾ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ1 ರವರ ಮಗ ಚಾಲನೆ ಮಾಡುತ್ತಿದ್ದ ಮೋಟಾರ್ ಸೈಕಲ್ ಗೆ ಡಿಕ್ಕಿಪಡಿಸಿದ ಪರಿಣಾಮ ಮೋಟಾರ್ ಸೈಕಲ್ ನ ಹಿಂಬದಿಯಲ್ಲಿ ಕುಳಿತಿದ್ದ ಚಾಸಾ1 ರವರು ಬೈಕಿನಿಂದ ಹಾರಿ ರಸ್ತೆಯ ಬಲಬದಿಯ ಮುನ್ನಾರವರ ಚಿಕ್ಕನ್ ಅಂಗಡಿಯ ಹತ್ತಿರ ಬಿದ್ದಿದ್ದು, ಚಾಸಾ1 ರವರ ತಲೆ ಮತ್ತು ಎಡಕಾಲಿನ ಮಂಡಿಯ ಬಳಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 337 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ನಿಮ್ಮ ವಾಹನವನ್ನು ತುಂಬಾ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ1 ರವರ ಮಗ ಚಾಲನೆ ಮಾಡುತ್ತಿದ್ದ ಮೋಟಾರ್ ಸೈಕಲ್ ಗೆ ಡಿಕ್ಕಿಪಡಿಸಿದ ಪರಿಣಾಮ ಮೋಟಾರ್ ಸೈಕಲ್ ನ ಚಾಲಕ ಮಂಜುನಾಥನು ಅರೋಪಿಯಾದ ನಿಮ್ಮ ಲಾರಿಯ ಅಡಿಗೆ ಸಿಕ್ಕಿಕೊಂಡಿದ್ದು, ಬೈಕ್ ನೊಂದಿಗೆ ಸ್ವಲ್ಪ ದೂರ ಉಜ್ಜಿಕೊಂಡು ಹೋಗಿ ಸುಮಾರು 50 ಅಡಿ ದೂರದಲ್ಲಿ ತೀವ್ರ ಗಾಯಗೊಂಡು ರಸ್ತೆಯ ಎಡಬದಿಗೆ ಬಿದ್ದಿದ್ದು, ತದನಂತರ ಮುಖಕ್ಕೆ, ಎದೆಭಾಗಕ್ಕೆ ತೀವ್ರವಾದ ರಕ್ತಗಾಯವಾಗಿ, ಮೂಗು ಬಾಯಿಯಿಂದ ರಕ್ತಸ್ರಾವವಾಗಿ ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 304(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**4.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಅಪಘಾತಪಡಿಸಿ ಚಾಸಾ1 ರವರನ್ನು ಉಪಚರಿಸಿ ಆಸ್ಪತ್ರೆಗೆ ಸೇರಿಸದೇ ಮತ್ತು ಅಪಘಾತದ ಬಗ್ಗೆ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡದೇ ಸ್ಥಳದಲ್ಲೇ ವಾಹನವನ್ನು ನಿಲ್ಲಿಸದೇ ಮುಂದೆ ಹೋಗಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ವಾಹನ ಕಾಯಿದೆ ಕಲಂ 187 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ದಿನಾಂಕ 18.04.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

Sd/-

ಮೂಡಿಗೆರೆ<br>
ದಿನಾಂಕಃ 18.04.2024

ಪ್ರಧಾನ ಸಿವಿಲ್ ನ್ಯಾಯಾಧೀಶರು<br>
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.